**2005 ರ ಕರ್ನಾಟಕ ಅಧಿನಿಯಮ ಸಂಖ್ಯೆ 02**

# ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ಅಧಿನಿಯಮ, 2005

## ಪ್ರಕರಣಗಳ ಪಟ್ಟಿ

ಪ್ರಕರಣಗಳು:


1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ
2. 3ನೇ ಪ್ರಕರಣದ ತಿದ್ದುಪಡಿ
3. 5ನೇ ಪ್ರಕರಣದ ತಿದ್ದುಪಡಿ
4. ನಿರಸನ ಮತ್ತು ಉಳಿಸುವಿಕೆಗಳು


## ಉದ್ದೇಶ ಮತ್ತು ಕಾರಣಗಳ ಹೇಳಿಕೆ

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ಅಧಿನಿಯಮ, 2004ರ ಅನ್ವಯ ತುಮಕೂರಿನಲ್ಲಿ ಕೇಂದ್ರ ಕಾರ್ಯಸ್ಥಾನವನ್ನು ಮತ್ತು ತುಮಕೂರು, ಕೋಲಾರ ಜಿಲ್ಲೆಗಳು ಹಾಗೂ ಕನಕಪುರ ಮತ್ತು ಹೊಸಕೋಟೆ ತಾಲ್ಲೂಕುಗಳನ್ನು ಹೊರತುಪಡಿಸಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಮೇಲೆ ಅಧಿಕಾರ ವ್ಯಾಪ್ತಿಯನ್ನು ಹೊಂದಿರುವ ತುಮಕೂರು ವಿಶ್ವವಿದ್ಯಾನಿಲಯವು ಅಸ್ತಿತ್ವದಲ್ಲಿ ಬಂದಿದೆ.

ತದನಂತರ ಕೋಲಾರ ಮತ್ತು ಬೆಂಗಳೂರು ಗ್ರಾಮೀಣ ಜಿಲ್ಲೆಗಳ ವಿದ್ಯಾರ್ಥಿಗಳ ಕೋರಿಕೆಗಳನ್ನು ಪರಿಗಣನೆಗೆ ತೆಗೆದುಕೊಂಡು, ತುಮಕೂರು ವಿಶ್ವವಿದ್ಯಾನಿಲಯದ ಅಧಿಕಾರ ವ್ಯಾಪ್ತಿಯನ್ನು ತುಮಕೂರು ಜಿಲ್ಲೆಗೆ ಸೀಮಿತಗೊಳಿಸಲು ಸರ್ಕಾರವು ನಿರ್ಧರಿಸಿದೆ.

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ, 2000ರ (2001ರ ಕರ್ನಾಟಕ ಅಧಿನಿಯಮ 29) ಸಂಬಂಧಿತ ಉಪಬಂಧಗಳನ್ನು ತಿದ್ದುಪಡಿ ಮಾಡುವುದು ಅವಶ್ಯಕವಾಗಿದೆ.

ಆದ್ದರಿಂದ ಈ ವಿಧೇಯಕ.

(2005ರ ವಿಧಾನಸಭೆಯ ವಿಧೇಯಕ ಸಂಖ್ಯೆ 2)

(ಭಾರತ ಸಂವಿಧಾನದ ಏಳನೇ ಅನುಸೂಚಿಯ 2ನೇ ಪಟ್ಟಿಯ ನಮೂದು 32 ಮತ್ತು 3ನೇ ಪಟ್ಟಿಯ ನಮೂದು 25)

**2005 ರ ಕರ್ನಾಟಕ ಅಧಿನಿಯಮ ಸಂಖ್ಯೆ 02**

(2005 ರ ಫೆಬ್ರವರಿ ಹದಿನಾರನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

**ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ಅಧಿನಿಯಮ, 2005**

(2005ರ ಫೆಬ್ರವರಿ ಹತ್ತನೇ ದಿನಾಂಕದಂದು ರಾಜ್ಯಪಾಲರಿಂದ ಅನುಮೋದನೆಯನ್ನು ಪಡೆಯಲಾಗಿದೆ)

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ, 2000ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ವಿಧೇಯಕ.

ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ, 2000 ನ್ನು (2001ರ ಕರ್ನಾಟಕ ಅಧಿನಿಯಮ 29) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು, ಭಾರತ ಗಣರಾಜ್ಯದ ಐವತ್ತಾರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ, ಎಂದರೆ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ಅಧಿನಿಯಮ, 2005 ಎಂದು ಕರೆಯತಕ್ಕದ್ದು.

(2) ಇದು ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ಅಧಿನಿಯಮ, 2004ರ (2004ರ ಕರ್ನಾಟಕ ಅಧಿನಿಯಮ, 10) ಪ್ರಾರಂಭದ ದಿನಾಂಕದಿಂದ ಜಾರಿಗೆ ಬಂದಿರುವುದಾಗಿ ಭಾವಿಸತಕ್ಕದ್ದು.

**2. 3ನೇ ಪ್ರಕರಣದ ತಿದ್ದುಪಡಿ.-** ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ, 2000ದ (2001ರ ಕರ್ನಾಟಕ ಅಧಿನಿಯಮ 29) (ಇದರಲ್ಲಿ ಇನ್ನು ಮುಂದೆ ಮೂಲ ಅಧಿನಿಯಮವೆಂದು ಉಲ್ಲೇಖಿಸಲಾಗಿದೆ), 3ನೇ ಪ್ರಕರಣದಲ್ಲಿ,-

(1) (1)ನೇ ಉಪಪ್ರಕರಣದ (ಎ) ಖಂಡದಲ್ಲಿ "ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಕನಕಪುರ ಮತ್ತು ಹೊಸಕೋಟೆ ತಾಲ್ಲೂಕುಗಳ" ಎಂಬ ಪದಗಳಿಗೆ "ಬೆಂಗಳೂರು ಜಿಲ್ಲೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ ಮತ್ತು ಕೋಲಾರ ಜಿಲ್ಲೆಗಳ" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು.

(2) (1-ಬಿ) ಉಪಪ್ರಕರಣದಲ್ಲಿ "ತುಮಕೂರು, ಕೋಲಾರ ಜಿಲ್ಲೆಗಳು ಮತ್ತು ಕನಕಪುರ ಮತ್ತು ಹೊಸಕೋಟೆ ತಾಲ್ಲೂಕುಗಳನ್ನು ಹೊರತುಪಡಿಸಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ" ಎಂಬ ಪದಗಳಿಗೆ "ತುಮಕೂರು ಜಿಲ್ಲೆ" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು.

**3. 5ನೇ ಪ್ರಕರಣದ ತಿದ್ದುಪಡಿ.-** ಮೂಲ ಅಧಿನಿಯಮ 5ನೇ ಪ್ರಕರಣದ (3)ನೇ ಉಪಪ್ರಕರಣದಲ್ಲಿ, "ಕನಕಪುರ ಮತ್ತು ಹೊಸಕೋಟೆ ತಾಲ್ಲೂಕುಗಳನ್ನು ಹೊರತುಪಡಿಸಿ ಬೆಂಗಳೂರು ಗ್ರಾಮಾಂತರ ಜಿಲ್ಲೆ ಮತ್ತು ಕೋಲಾರ, ತುಮಕೂರು ಜಿಲ್ಲೆಗಳಲ್ಲಿ" ಎಂಬ ಪದಗಳಿಗೆ "ತುಮಕೂರು ಜಿಲ್ಲೆಯಲ್ಲಿ" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು.

**4. ನಿರಸನ ಮತ್ತು ಉಳಿಸುವಿಕೆಗಳು.-** (1) ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ಅಧ್ಯಾದೇಶ, 2004 ನ್ನು (2004ರ ಕರ್ನಾಟಕ ಅಧ್ಯಾದೇಶ 1) ಈ ಮೂಲಕ ನಿರಸನಗೊಳಿಸಲಾಗಿದೆ.

(2) ಹಾಗೆ ನಿರಸನಗೊಳಿಸಿದ್ದಾಗ್ಯೂ, ಸದರಿ ಅಧ್ಯಾದೇಶದ ಮೂಲಕ ತಿದ್ದುಪಡಿಯಾದ ಮೂಲ ಅಧಿನಿಯಮದ ಅಡಿಯಲ್ಲಿ ಮಾಡಿದ ಯಾವುದೇ ಕಾರ್ಯ ಅಥವಾ ಕೈಗೊಂಡ ಯಾವುದೇ ಕ್ರಮವನ್ನು ಈ ಅಧಿನಿಯಮದ ಮೂಲಕ ತಿದ್ದುಪಡಿಯಾದ ಮೂಲ ಅಧಿನಿಯಮದ ಅಡಿಯಲ್ಲಿ ಕಾರ್ಯ ಮಾಡಲಾಗಿದೆ ಅಥವಾ ಕ್ರಮ ಕೈಗೊಳ್ಳಲಾಗಿದೆ ಎಂದು ಭಾವಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ
ಹೆಸರಿನಲ್ಲಿ

**ಜಿ. ದಕ್ಷಿಣಾಮೂರ್ತಿ**
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ.

---

ಕರ್ನಾಟಕ ರಾಜ್ಯ ಪತ್ರದ ಭಾಗ-IVಎ ವಿಶೇಷ ಪತ್ರಿಕೆ ಸಂಖ್ಯೆ: 241 ದಿನಾಂಕ: 16.2.2005 ರಲ್ಲಿ ಪ್ರಕಟಿತ ಕಡತ ಸಂಖ್ಯೆ: ಸಂವ್ಯಶಾಇ 39 ಶಾಸನ 2004.